**CC No.43/2022**
**PW.8**

**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ದೊಡ್ಡಬಳ್ಳಾಪುರ**

**ಸಿಸಿ ನಂ 43/2022**

ಸಿ.ಡಬ್ಲೂಃ **09**        ಪಿಡಬ್ಲೂಃ **08**

| | |
|---|---|
| ಸಾಕ್ಷಿದಾರರ ಹೆಸರು | ಚೆಲುವರಾಜು |
| ತಂದೆಯ ಹೆಸರು | ಮುನಿಯಪ್ಪ |
| ವಯಸ್ಸು | 47 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ ಸ್ಥಳ | ಕಲ್ಲುಕೋಟೆ |

**ದಿನಾಂಕಃ 09.01.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ** ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರವರಿಂದ

ಸಾಕ್ಷಿಯು ನಿಪಿ-3 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಸುಮಾರು 2 ವರ್ಷಗಳ ಹಿಂದೆ ನಿಪಿ-3 ಕ್ಕೆ ಸಹಿ ಮಾಡಿರುತ್ತೇನೆ.  ಸದರಿ ಸಮಯದಲ್ಲಿ ಚಾಸಾ-8 ಮತ್ತು ಇನ್ನಿತರರು ಹಾಜರಿರುತ್ತಾರೆ. ಚಾಸಾ-1 ರವರ ಮದುವೆ ವಿಚಾರಕ್ಕೆ ಸಹಿ ಮಾಡಿರುತ್ತೇನೆ.

(ಸಾಕ್ಷಿಯನ್ನು ಭಾಗಶಃ ಪ್ರತೀಕೂಲ ಸಾಕ್ಷಿಯೆಂದು ಮಾನ್ಯ ಅಭಿಯೋಜನೆಯು ಪಾಟೀ ಸವಾಲಿಗೆ ಅವಕಾಶ ಕೋರಿದ್ದು ನೀಡಲಾಯಿತು. )

ಪಾಟೀ ಸವಾಲುಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರವರಿಂದ

ದಿಃ 28.07.2021 ರಂದು ನಿಪಿ-3 ನ್ನು ಜರುಗಿಸಿದ್ದು ಸದರಿ ಸಮಯದಲ್ಲಿ ಚಾಸಾ-1 ಮತ್ತು ಚಾಸಾ-8 ರವರು ಸಹಿ ಮಾಡಿದ್ದು, ಚಾಸಾ-1 ಮತ್ತು ಆರೋಪಿ ವರದಕ್ಷಿಣೆ ವಿಚಾರವಾಗಿ ಮತ್ತು ಆರೋಪಿ ಚಾಸಾ-1 ರವರಿಗೆ ದೈಹಿಕ ಹಾಗೂ ಮಾನಸಿಕ ಹಿಂಸೆ ನೀಡಿದ ಬಗ್ಗೆ ದೂರು ದಾಖಲಾಗಿದ್ದು, ಆ ವಿಚಾರಕ್ಕೆ ಸಂಬಂಧ ಪಟ್ಟಂತೆ ಚಾಸಾ-1 ರವರ ಲಗ್ನ ಪತ್ರಿಕೆ, ಮದುವೆಯ ಭಾವಚಿತ್ರಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿ.

**CC No.43/2022**
**PW.8**

<u>ಪಾಟೀ ಸವಾಲುಃ</u> ಆರೋಪಿ ಪರ ವಕೀಲರಿಂದ

ದಿಃ 27.08.2021 ರಂದು ನನ್ನ ಸಮಕ್ಷಮ ನಿಪಿ-4 ರಿಂದ 8 ದಾಖಲೆಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಸದರಿ ದಿನ ನಾನು ಸ್ಥಳದಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ. ನಿಪಿ-3 ರನ್ನು ಪೋಲೀಸ್ ಠಾಣೆ ಆವರಣದಲ್ಲಿ ಜರುಗಿಸಿರುತ್ತಾರೆ. ಚೆಕ್ಕುಬಂಧಿ ಗೊತ್ತಿಲ್ಲ. ಆ ದಿನ ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ</u> ಇಲ್ಲ

**(ನನ್ನ ಉಕ್ತಲೇಖನ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸರಿ ಇದೆ**

**ಅಪರ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ,**
**ದೊಡ್ಡಬಳ್ಳಾಪುರ .**